# ಯತ್ನಾಳ್‌ಗೆ ನೋಟಿಸ್

## ಸಿಎಂ ವಿರುದ್ಧದ ಹೇಳಿಕೆ ಹಿನ್ನೆಲೆ ಹೈಕಮಾಂಡ್ ಗರಂ

**ಬೆಂಗಳೂರು:** ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಹೇಳಿಕೆ ನೀಡುತ್ತಿರುವ ವಿಜಯಪುರ ಶಾಸಕ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಕಾರಣ ಕೇಳಿ ಬಿಜೆಪಿ ಹೈಕಮಾಂಡ್ ನೋಟೀಸ್ ನೀಡಿದೆ.



ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಅವರು ನೋಟೀಸ್ ನೀಡಿದ್ದಾರೆ. ಪಕ್ಷದ ನಾಯಕತ್ವದ ವಿರುದ್ಧ ನಿರಂತರ ಹೇಳಿಕೆ ನೀಡುತ್ತಿರುವುದು ಪಕ್ಷದ ಶಿಸ್ತು ಉಲ್ಲಂಘನೆಯಾಗುತ್ತದೆ. ಪಕ್ಷದ ಚೌಕಟ್ಟಿನಲ್ಲಿ ಶಿಸ್ತು ಪಾಲನೆ ಕಡ್ಡಾಯವಾಗಿದ್ದು ತಾವು ಸಿಎಂ ಹಾಗೂ ಸರ್ಕಾರದ ವಿರುದ್ಧ ಹೇಳಿಕೆ ನೀಡುತ್ತಿರುವುದು ಪಕ್ಷ ಮತ್ತು ಸರ್ಕಾರಕ್ಕೆ ಮುಜುಗರ ಉಂಟು ಮಾಡುತ್ತದೆ. ಈ ರೀತಿಯ ಹೇಳಿಕೆ ಗಳಿಂದ ಪ್ರತಿಪಕ್ಷಗಳಿಗೂ ಸರ್ಕಾರ ಹಾಗೂ ಸಿಎಂ ಬಗ್ಗೆ ಆರೋಪ ಮಾಡಲು ಅವಕಾಶ ನೀಡಿದಂತಾಗುತ್ತದೆ. ಇದರ ಪರಿಣಾಮ ಆಡಳಿತದ ಮೇಲೂ ಆಗುತ್ತದೆ. ತಮ್ಮ ಈ ರೀತಿಯ ಹೇಳಿಕೆಗಳ ಬಗ್ಗೆ ಒಂದು ವಾರದಲ್ಲಿ ಸ್ಪಷ್ಟೀಕರಣ ನೀಡುವಂತೆ ನೋಟೀಸ್ ನೀಡಿದ್ದಾರೆ.

**ಭಯಪಡುವುದಿಲ್ಲ:** ನೋಟಿಸ್ ಸಂಬಂಧ ಮಾತನಾಡಿದ ಯತ್ನಾಳ್ 'ಉತ್ತರ ಕರ್ನಾಟಕ ಭಾಗದವರು ಮುಖ್ಯಮಂತ್ರಿಯಾಗುವುದನ್ನು ತಪ್ಪಿಸಲು ಕೇಂದ್ರ ನಾಯಕರಿಂದ ಒತ್ತಾಯ ಮಾಡಿ ನೋಟಿಸ್ ಕೊಡಿಸುವ ಪ್ರಯತ್ನ ನಡೆದಿದೆ. ನನ್ನನ್ನು ಮೂರು ಸಾರಿ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ, ಇದಕ್ಕೆಲ್ಲ ಭಯ ಪಡುವುದಿಲ್ಲ' ಎಂದು ಹೇಳಿದ್ದಾರೆ.

ತಮ್ಮ ಹೇಳಿಕೆಗಳ ವಿರುದ್ಧ ಹೈಕಮಾಂಡ್ ಕಾರಣ ಕೇಳಿ ನೋಟೀಸ್ ನೀಡಿರುವ ಬಗ್ಗೆ ಯಾವುದೇ ಮಾಹಿತಿ ಇಲ್ಲ, ಅಲ್ಲದೆ ತಾವು ಪಕ್ಷ ವಿರೋಧಿ ಚಟುವಟಿಕೆ ಮಾಡಿಲ್ಲ, ನೋಟಿಸ್ ನೀಡಿರುವ ಬಗ್ಗೆ ಮಾಧ್ಯಮಗಳಲ್ಲಿ ಬರುತ್ತಿದೆ. ನನಗೆ ಇನ್ನೂ ಯಾವುದೇ ನೋಟಿಸ್ ತಲುಪಿಲ್ಲ ಎಂದು ಯತ್ನಾಳ್ ಹೇಳಿದ್ದಾರೆ.

ಶಾಸಕರ ಭಾವನೆಗಳನ್ನು ಮುಚ್ಚಿಡಲು ಆಗುವುದಿಲ್ಲ, ಕ್ರಾಂತಿಯನ್ನು ಮುಚ್ಚಿಡಲಾಗುವುದಿಲ್ಲ, ಕ್ರಾಂತಿ ಒಮ್ಮೆಲೆ ಸ್ಫೋಟ ಆಗುವುದಿಲ್ಲ, ಆದರೆ, ಕ್ರಾಂತಿ ಆಗುವುದು ಖಚಿತ. ಕ್ರಾಂತಿ ಆದ ಮೇಲೆಯೇ ಶಾಂತಿಯಾಗುವುದು. ಈಗ ಕೆಲವು ಶಾಸಕರು ಮೋದಿಯವರಿಗೆ ಪತ್ರ ಬರೆದಿರುವುದೇ ಇದಕ್ಕೆ ಸಾಕ್ಷಿ ಎಂದು ಹೇಳಿದರು.

ಈ ಮಧ್ಯೆ ಯತ್ನಾಳ್‌ಗೆ ನೋಟಿಸ್ ನೀಡಿರುವುದಕ್ಕೆ ಕೂಡಲ ಸಂಗಮ ಪೀಠದ ಬಸವ ಮೃತ್ಯುಂಜಯ ಶ್ರೀಗಳು ಕಿಡಿಕಾರಿದ್ದಾರೆ. ಇದು ಸಮುದಾಯದವರನ್ನು ಹತ್ತಿಕ್ಕುವ ಕ್ರಮ ಎಂದೂ ಆರೋಪಿಸಿದ್ದಾರೆ.